ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಕೊಡಗು ಜಿಲ್ಲೆಯಲ್ಲಿ ಗಿರಿಜನರಿಗೆ ಭೂಮಿ ಮಂಜೂರು ಮಾಡುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-

308 (343) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಎಷ್ಟು ಗಿರಿಜನ ಫಲಾನುಭವಿಗಳಿಗೆ ಭೂಮಿಯನ್ನು ಮಂಜೂರು ಮಾಡಲಾಗಿದೆ;

(ಆ) ಜಿಲ್ಲೆಯಲ್ಲಿ ಇದುವರೆಗೂ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಭೂಮಿಯನ್ನು ಮಂಜೂರು ಮಾಡುವಂತೆ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು;

(ಇ) ಸದರಿ ಅರ್ಜಿಗಳಲ್ಲಿ ಇದುರೆವಿಗೂ ವಿಲೇವಾರಿಯಾಗದೆ ಉಳಿದಿರುವ ಅರ್ಜಿಗಳೆಷ್ಟು;

(ಈ) ಜಿಲ್ಲೆಯಲ್ಲಿ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಭೂಮಿ ಹಂಚಿಕೆ ಮಾಡುವಲ್ಲಿ ಅನಗತ್ಯ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಯಾವ ಕಾಲಮಿತಿಯೊಳಗೆ ಸದರಿ ಗಿರಿಜನ ಫಲಾನುಭವಿಗಳಿಗೆ ಭೂಮಿ ಮಂಜೂರು ಮಾಡಿ, ಹಕ್ಕುಪತ್ರ ವಿತರಣೆ ಮಾಡಲಾಗುವುದು ?